ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಹೊಸದಾಗಿ ನೇಮಕಗೊಂಡ ಮೇಲ್ವಿಚಾರಕಿಯರ ಸ್ಥಳ ನಿಯುಕ್ತಿ ಕುರಿತು

ಶ್ರೀ ಸುನೀಲ್‌ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

373(372) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಇತ್ತೀಚೆಗೆ ಕರ್ನಾಟಕ ಲೋಕಸೇವಾ ಆಯೋಗದಿಂದ ನೇಮಕಗೊಂಡ ಮಹಿಳಾ ಮೇಲ್ವಿಚಾರಕಿಯರ ಸ್ಥಳ ನಿಯುಕ್ತಿಯಲ್ಲಿ ಗೊಂದಲಗಳು ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರಿಪಡಿಸಲು ಕೈಗೊಂಡ ಕ್ರಮಗಳೇನು;

(ಆ) ಮೇಲ್ವಿಚಾರಕಿಯರ ಸ್ಥಳ ನಿಯುಕ್ತಿಯು ನಿಯಮಗಳ ಪ್ರಕಾರ ಆಗಿದೆಯೇ; ಯಾವ ರೀತಿಯಲ್ಲಿ ಸ್ಥಳ ನಿಯುಕ್ತಿಯನ್ನು ಮಾಡಲಾಗಿದೆ;

(ಇ) ಮೇಲ್ವಿಚಾರಕಿಯರ ಸ್ಥಳ ನಿಯುಕ್ತಿಯನ್ನು ಕೌನ್ಸಿಲಿಂಗ್ ಮೂಲಕ ಮಡಲಾಗಿದೆಯೇ; ಕೌನ್ಸಿಲಿಂಗ್ ಮೂಲಕ ಮಾಡಲಾಗಿದ್ದರೆ, ಎಲ್ಲಾ ಅಭ್ಯರ್ಥಿಗಳಿಗೂ ಏಕಕಾಲದಲ್ಲಿ ಕೌನ್ಸಿಲಿಂಗ್ ಏಕೆ ಮಾಡಲಿಲ್ಲ, ಮತ್ತು ಕೌನ್ಸಿಲಿಂಗ್‌ಗೆ ಹಾಜರಾಗಲು ಎಲ್ಲಾ ಅಭ್ಯರ್ಥಿಗಳಿಗೆ ಸಾಕಷ್ಟು ಕಾಲಾವಕಾಶ ನೀಡಲಾಗಿತ್ತೆ; ನೀಡಲಾಗಿದ್ದರೆ, ಎಷ್ಟು ದಿನಗಳ ಕಾಲಾವಕಾಶ ನೀಡಲಾಗಿತ್ತು;

(ಈ) ಕೌನ್ಸಿಲಿಂಗ್ ಮಾಡುವ ಪೂರ್ವದಲ್ಲಿ ಖಾಲಿ ಹುದ್ದೆಗಳ ಪಟ್ಟಿಯನ್ನು ಅಭ್ಯರ್ಥಿಗಳ ಗಮನಕ್ಕೆ ತರಲಾಗಿತ್ತೆ;

(ಉ) ಕೌನ್ಸಿಲಿಂಗ್‌ಗೆ ಹಾಜರಾಗಲು ಸೂಕ್ತ ಸಮಯಾವಕಾಶವನ್ನು ನೀಡದಿರುವುದಕ್ಕೆ ಕಾರಣಗಳೇನು;

(ಊ) ಆಗಿರುವ ಗೊಂದಲವನ್ನು ಮತ್ತು ಕೆಲವೊಂದು ಅಭ್ಯರ್ಥಿಗಳಿಗೆ ಆಗಿರುವ ಅನ್ಯಾಯವನ್ನು ಸರಿಪಡಿಸಲು ಮತ್ತೊಮ್ಮೆ ಎಲ್ಲಾ ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?